# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **403** |
| **ವಿಧಾನ ಪರಿಷತ್ತು ಸದಸ್ಯರ ಹೆಸರು** | : | **ಶ್ರೀ. ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸುವ ಸಚಿವರು** | : | **ಮಾನ್ಯ ತೋಟಗಾರಿಕೆ ಹಾಗೂ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.** |
| **ಉತ್ತರಿಸಬೇಕಾದ ದಿನಾಂಕ** | : | **18.02.2022.** |

| ಪ್ರಶ್ನೆ | ಉತ್ತರ |
|---|---|
| ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪಾಲಿಹೌಸ್ ಗಳ ಸಂಖ್ಯೆ ಎಷ್ಟು: (ತಾಲ್ಲೂಕುವಾರು ವಿವರ ನೀಡುವುದು) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪಾಲಿಹೌಸ್ ಗಳ ಸಂಖ್ಯೆ 19. ತಾಲ್ಲೂಕುವಾರು ವಿವರ ಈ ಕೆಳಕಂಡತಿವೆ. |

| ಕಲಬುರಗಿ ಜಿಲ್ಲೆ | | ಯಾದಗಿರಿ ಜಿಲ್ಲೆ | |
|---|---|---|---|
| ತಾಲ್ಲೂಕು | ಸಂಖ್ಯೆ | ತಾಲ್ಲೂಕು | ಸಂಖ್ಯೆ |
| ಅಫಜಲಪೂರ | 1 | ಯಾದಗಿರಿ | 2 |
| ಆಳಂದ | 7 | ಶಹಾಪುರ | 2 |
| ಕಲಬುರಗಿ | 3 | ಸುರಪುರ | 3 |
| ಸೇಡಂ | 1 | | |
| ಚಿಂಚೋಳಿ | 0 | | |
| ಚಿತ್ತಾಪೂರ | 0 | | |
| ಜೇವರ್ಗಿ | 0 | | |
| **ಒಟ್ಟು** | **12** | **ಒಟ್ಟು** | **7** |
| **ಒಟ್ಟು 19** | | | |

| ಪ್ರಶ್ನೆ | ಉತ್ತರ |
|---|---|
| ಪಾಲಿಹೌಸ್ ಗಳಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹ ಧನವೆಷ್ಟು: (ವಿವರ ನೀಡುವುದು) | ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಪಾಲಿಹೌಸ್‌ನ ಪ್ರತಿ ಚದರ ಮೀಟರ್ ಘಟಕ ವೆಚ್ಚ ರೂ.791 ರಂತೆ 0.4 ಹೆಕ್ಟೇರ್ ವರೆಗೆ ಶೇಕಡ 50% ರಷ್ಟು ಸಹಾಯಧನವನ್ನು ರೈತರಿಗೆ ನೀಡಲಾಗುತ್ತಿದೆ. |
| ಪ್ರೋತ್ಸಾಹ ಧನ ನೀಡಲು ಅನುಸರಿಸುವ ಮಾನದಂಡಗಳೇನು? (ವಿವರ ನೀಡುವುದು) | ಪ್ರೋತ್ಸಾಹಧನ ನೀಡಲು ಅನುಸರಿಸುವ ಮಾನದಂಡಗಳು ಈ ಕೆಳಕಂಡಂತಿವೆ.<br>1) ಫಲಾನುಭವಿಗಳು ರೈತರಾಗಿದ್ದು ಜಮೀನು ಅವರ ಹೆಸರಿನಲ್ಲಿರಬೇಕು.<br>2) ಜಂಟಿ ಖಾತೆಯಾಗಿದ್ದಲ್ಲಿ ಇತರೆ ಖಾತೆದಾರರ ಒಪ್ಪಿಗೆ ಪತ್ರ ಪಡೆದಿರಬೇಕು (Notary ರವರಿಂದ ದೃಢೀಕರಣ ಮಾಡಿಸಬೇಕು).<br>3) ತಂದೆ ಅಥವಾ ತಾಯಿ ಹೆಸರಿನಲ್ಲಿ ಜಮೀನಿದ್ದು, ಅವರು ಮರಣ ಹೊಂದಿದ್ದಲ್ಲಿ ಮೃತ್ರ ಮರಣ ಪತ್ರ-ಸಕ್ಷಮ ಪ್ರಾಧಿಕಾರದಿಂದ, ಗ್ರಾಮ ಲೆಕ್ಕಿಗರಿಂದ ದೃಢೀಕರಿಸಿ, ಕುಟುಂಬದ ಇತರೆ ಸದಸ್ಯರಿಂದ ಒಪ್ಪಿಗೆ ಪಡೆದು ತಮ್ಮ ಹೆಸರಿನಲ್ಲಿ ಅರ್ಜಿ ಸಲ್ಲಿಸುವುದು. |

|  |  |
|---|---|
|  | 4) ಮಹಿಳೆಯ ಹೆಸರಿನಲ್ಲಿ ಖಾತೆ ಹೊಂದಿದ್ದು, ಕುಟುಂಬದ ಇತರೆ ಪುರುಷ ಸದಸ್ಯರ ಹೆಸರಿನಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಕಾರಣಕ್ಕೂ ಮಾನ್ಯ ಮಾಡಬಾರದು. ಮಹಿಳೆಯರ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸುವುದನ್ನು ಉತ್ತೇಜಿಸಬೇಕು.<br>5) ಫಲಾನುಭವಿಗಳು ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಾಗಿರಬೇಕು ಅಥವಾ ತೋಟಗಾರಿಕೆ ಬೆಳೆ ಬೆಳೆಯುವ ಆಸಕ್ತಿ ಹೊಂದಿರಬೇಕು. |

HORTI 75 HGM 2022

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ,
ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಸಚಿವರು